# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ನರಸಿಂಗರಾವ್ ಮುತಾಲಿಕ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಹಾಪೂರ ಇವರ ಅಮಾನತ್ತು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ.

ಓದಲಾಗಿದೆ: 1ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ಪತ್ರ,ಸಂಖ್ಯೆ:ಗ್ರಾಅಪ/ಸಾಪನಿ/2/(ಉಖಾಯೋ)/2014, ದಿ:6-5-2014.

2. ಸರ್ಕಾರದ ಆದೇಶ ಸಂ. ಗ್ರಾಅಪ 125 ವಿಸೇಬಿ 2014 ದಿನಾಂಕ: 30-05-2014.

3. ಶ್ರೀ ನರಸಿಂಗರಾವ್ ಮುತಾಲಿಕ್, ಇವರ ಮನವಿ ದಿನಾಂಕ.12-01-2015.

## ಪ್ರಸ್ತಾವನೆ:

ನಿರ್ದೇಶಕರು, ಸಮಾಜಿಕ ಪರಿಶೋಧನಾ ನಿರ್ದೇಶನಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಸಲ್ಲಿಸಿರುವ ವರದಿಯಲ್ಲಿ ಯಾದಗಿರಿ ಜಿಲ್ಲೆಯಲ್ಲಿ 2013-14ನೇ ಸಾಲಿನಲ್ಲಿ ವಿವಿಧ ತಾಲ್ಲೂಕುಗಳ ಗ್ರಾಮ ಪಂಚಾಯತಿಗಳಲ್ಲಿ ವಿಶೇಷ ಸಾಮಾಜಿಕ ಪರಿಶೋಧನೆ ವರದಿಯಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದಲ್ಲಿ ಬಹಳಷ್ಟು ಅಕ್ರಮಗಳನ್ನು ಎಸಗಿದ್ದು, ಹಣ ದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಈ ಸಂಬಂಧದಲ್ಲಿ ಸದರಿ ಜಿಲ್ಲೆಯ ಶಹಾಪುರ ತಾಲ್ಲೂಕಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದಲ್ಲಿ ಬಹಳ ಪ್ರಮಾಣದಲ್ಲಿ ಅಕ್ರಮ ಎಸಗಿ ಹಣ ದುರುಪಯೋಗ ಮಾಡಿರುವುದು ವರದಿಯಲ್ಲಿ ಕಂಡು ಬಂದ ಹಿನ್ನೆಲೆಯಲ್ಲಿ ಇದಕ್ಕೆ ಕಾರಣರಾಗಿರುವರೆನ್ನಲಾದ ಶ್ರೀ ನರಸಿಂಗರಾವ್ ಮುತಾಲಿಕ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಹಾಪೂರ ಇವರನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ದಿನಾಂಕ: 30-05-2014 ರ ಆದೇಶದಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿ ಆದೇಶಿಸಲಾಗಿತ್ತು.

ಶ್ರೀ ನರಸಿಂಗರಾವ್ ಮುತಾಲಿಕ್, ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಮನವಿ ಸಲ್ಲಿಸಿ ತಮ್ಮನ್ನು ಅಮಾನತ್ತುಗೊಳಿಸಿ ಏಳೂವರೆ ತಿಂಗಳುಗಳು ಗತಿಸಿದ್ದು, ಅಮಾನತ್ತು ಆದೇಶದಿಂದ ಕುಟುಂಬ ನಿರ್ವಹಣೆ ಮತ್ತು ಮಕ್ಕಳ ವಿದ್ಯಾಭ್ಯಾಸದ ಮುಂದುವರಿಕೆಯಲ್ಲಿ ಆರ್ಥಿಕ ತೊಂದರೆಯನ್ನು ಅನುಭವಿಸಿರುವುದರಿಂದ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು, ತಮ್ಮ ಮನವಿಯನ್ನು ಸಹಾನುಭೂತಿಯಿಂದ ಪರಿಗಣಿಸಿ ಅಮಾನತ್ತು ಆದೇಶವನ್ನು ತೆರವುಗೊಳಿಸಿ ಮರುಸ್ಥಳ ನಿಯುಕ್ತಿ ಆದೇಶ ನೀಡಬೇಕೆಂದು ಕೋರಿರುತ್ತಾರೆ.

ಸರ್ಕಾರವು ಶ್ರೀ ನರಸಿಂಗರಾವ್ ಮುತಾಲಿಕ್, ಇವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಅಧಿಕಾರಿ ವಿರುದ್ಧ ಮಾಡಿರುವ ಆರೋಪಗಳ ಕುರಿತಂತೆ ಇಲಾಖಾ ವಿಚಾರಣೆ ಬಾಕಿ ಇರಿಸಿ

ಸದರಿಯವರ ಅಮಾನತ್ತನ್ನು ತೆರವುಗೊಳಿಸಲು, ಸರ್ಕಾರವು ನಿರ್ಧರಿಸಿದೆ. ಅದರನ್ವಯ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 125 ವಿಸೇಬಿ 2014, ಬೆಂಗಳೂರು, ದಿನಾಂಕ:08-04-2015**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ನರಸಿಂಗರಾವ್ ಮುತಾಲಿಕ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಹಾಪೂರ, ಯಾದಗಿರಿ ಜಿಲ್ಲೆ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸದರಿ ಅಧಿಕಾರಿಯವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ, ಇವರನ್ನು ಮಾತೃ ಇಲಾಖೆಯಾದ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಬೆಂಗಳೂರು.
3. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಆಯುಕ್ತಾಲಯ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಯಾದಗಿರಿ
5. ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಬೆಂಗಳೂರು.
6. ಸಂಬಂಧಿಸಿದ ಅಧಿಕಾರಿಗೆ (ನೇರ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ ಯಾದಗಿರಿ ಇವರ ಮೂಲಕ)

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ, ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ. ವಿಧಾನ ಸೌಧ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ) ಗ್ರಾಮೀಣಾಭಿವೃದ್ಧಿ, ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಶಾಖೆಗೆ.
3. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.